೨) ಈ ನಗರಕ್ಕೆ ಹಾಲಿ ನೀರು ಸರಬರಾಜನ್ನು ತುಂಗಭದ್ರಾ ನದಿಯನ್ನು ಮತ್ತು ಭದ್ರಾ ಕಾಲವೆಯನ್ನು ಮೂಲವಾಗಿ ಇಟ್ಟುಕೊಂಡು ಈ ಕೆಳಕಂಡ ಪ್ರಮಾಣದಲ್ಲಿ ನೀರನ್ನು ಸರಬರಾಜು ಮಾಡಬಹುದಾಗಿದೆ.

೧) ತುಂಗಭದ್ರಾ ನದಿಯಿಂದ — ೧೫.೦೦ ಲಕ್ಷ ಗ್ಯಾಲನ್
೨) ಭದ್ರಾಕಾಲುವೆಯಿಂದ — ೪೫.೦೦ ಲಕ್ಷ ಗ್ಯಾಲನ್

ಇದಲ್ಲದೆ ಈ ನಗರದಲ್ಲಿ ಕ್ಷಾಮ ಪರಿಹಾರ ಕಾರ್ಯಕ್ರಮದಲ್ಲಿ ಇಲ್ಲಿಯವರೆಗೆ ೧೨೦ ಕೊಳವೆ ಬಾವಿಗಳನ್ನು ಕೊರೆದಿದ್ದು ಅವುಗಳಲ್ಲಿ ೧೧೩ ಕೊಳವೆ ಬಾವಿಗಳಿಗೆ ಕೈ ಪಂಪುಗಳನ್ನು ಹಾಗೂ ಹೆಚ್ಚು ಇಳುವರಿ ಇರುವ ೭ ಕೊಳವೆ ಬಾವಿಗಳಿಗೆ ವಿದ್ಯುತ್ ಪಂಪುಗಳನ್ನು ಅಳವಡಿಸಿ, ಈ ಮೂಲದಿಂದ ೫.೦೦ ಲಕ್ಷ ಗ್ಯಾಲನ್ ನೀರನ್ನು ಒದಗಿಸಲಾಗುತ್ತಿದೆ. ಆದರೆ ಮೇಲಿನ ಎಲ್ಲಾ ಮೂಲಗಳಿಂದ ಹಾಲಿ ದಿನಂಪ್ರತಿ ೪೫ ಲಕ್ಷ ಗ್ಯಾಲನ್ ನೀರನ್ನು ಸರಬರಾಜು ಮಾಡಲಾಗುತ್ತಿದ್ದು ನೀರಿನ ಪ್ರಮಾಣವು ಹಾಲಿ ಜನಸಂಖ್ಯೆಗೆ ದಿನಂಪ್ರತಿ ತಲಾ ೧೮ ಗ್ಯಾಲನ್ ಆಗಿರುತ್ತದೆ.

ದಾವಣಗೆರೆ ನಗರಕ್ಕೆ ತುಂಗಭದ್ರಾ ನದಿಯಿಂದ ಒಂದು ಸಮಗ್ರ ನೀರು ಸರಬರಾಜು ಯೋಜನೆಯನ್ನು ೧೩ ಕೋಟಿ ರೂಪಾಯಿಗಳ ಅಂದಾಜಿನಲ್ಲಿ ತಯಾರಿಸಲಾಗುತ್ತಿದೆ.

ಬಂಟ್ವಾಳ ತಾಲ್ಲೂಕಿನಲ್ಲಿ ಮುಖ್ಯೋಪಾಧ್ಯಾಯರುಗಳ ಹುದ್ದೆಗಳನ್ನು ಭರ್ತಿ ಮಾಡುವುದು

೪೩೮. ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ).— ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಎರಡು ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಮಂಚಿ ಸರ್ಕಾರಿ ಪ್ರೌಢ ಶಾಲೆ ಮತ್ತು ಇತರೆ ಕೆಲವು ಪ್ರೌಢ ಶಾಲೆಗಳಲ್ಲಿ ಮುಖ್ಯೋಪಾಧ್ಯಾಯರ ಹುದ್ದೆಗಳು ಖಾಲಿ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ;

ಆ) ಹಾಗಿದ್ದಲ್ಲಿ ಇದಕ್ಕೆ ಕಾರಣವೇನು ?

ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಕೆ. ಹೆಚ್. ರಂಗನಾಥ್ (ಶಿಕ್ಷಣ ಮಂತ್ರಿಗಳು).—

ಅ) ಹೌದು.

ಆ) ಆರ್ಥಿಕ ಮಿತವ್ಯಯದ ಕಾರಣದಿಂದಾಗಿ ಕಾಲಕಾಲಕ್ಕೆ ನೇರ ನೇಮಕಾತಿ ಆಗದೇ ಇರುವುದರಿಂದ ಈ ಹುದ್ದೆಗಳು ಖಾಲಿ ಉಳಿದಿವೆ.

ಇ) ಹೌದು. ಆರ್ಥಿಕ ಮಿತವ್ಯಯ ಸಡಿಲಗೊಂಡ ತಕ್ಷಣ.

ರಾಜ್ಯದಲ್ಲಿರುವ ಸರಕಾರಿ ಡಿಪ್ಲೊಮೋ ಮಹಾವಿದ್ಯಾಲಯಗಳು.

೪೩೧. ಶ್ರೀ ಶಿವಾನಂದ ಹೆಚ್. ಕಾಜಲಗಿ (ಬೈಲಹೊಂಗಲ).— ಮಾನ್ಯ ಶಿಕ್ಷಣ, ಯುವಜನ ವ್ಯವಹಾರಗಳು, ಕ್ರೀಡೆಗಳು, ಕನ್ನಡ ಮತ್ತು ಸಂಸ್ಕೃತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿರುವ ಸರ್ಕಾರಿ ಡಿಪ್ಲೊಮಾ ಇಂಜಿನಿಯರಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು ; ಹಾಗೂ ಖಾಸಗಿ ಡಿಪ್ಲೊಮೊ ಕಾಲೇಜುಗಳ ಸಂಖ್ಯೆ ಎಷ್ಟು ? (ಕಾಲೇಜುಗಳ ಹೆಸರು ಹಾಗೂ ವಿವರಗಳನ್ನು ನೀಡುವುದು)

ಆ) ಇವುಗಳ ಪೈಕಿ ಸರ್ಕಾರಿ ಡಿಪ್ಲೊಮೋ ಇಂಜನಿಯರಿಂಗ್ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? ಹಾಗೂ ಖಾಸಗಿ ಡಿಪ್ಲೊಮಾ ಇಂಜನಿಯರಿಂಗ್ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ?

ಇ) ಇವರ ಪೈಕಿ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? ಹಾಗೂ ಹೊರ ರಾಜ್ಯದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ?